ಅಧ್ಯಕ್ಷತೆಯಲ್ಲಿ ರಚಿತವಾದ ಉನ್ನತಮಟ್ಟದ ಸಮಿತಿಯ ಮುಂದೆ ಮಂಡಿಸಿ, ಸಮಿತಿಯ ಶಿಫಾರಸ್ಸಿನ ನಂತರ ಕ್ರಮ ಕೈಗೊಳ್ಳಲಾಗುವುದು.

302 ಶ್ರೀ ಕುಮಾರಸ್ವಾಮಿ ಕೆ.ಜಿ. : ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ತಾಲ್ಲೂಕಿನ ತುಂಗಾ ಏತ ನೀರಾವರಿ ಯೋಜನೆಯನ್ನು ಎಂದು ಪ್ರಾರಂಭ ಮಾಡಲಾಗುವುದು;

ಆ) ಪ್ರಸಕ್ತ ಸಾಲಿನಲ್ಲಿ ಈ ಯೋಜನೆಗೆ ಆಯವ್ಯಯದಲ್ಲಿ ಎಷ್ಟು ಹಣ ಒದಗಿಸಲಾಗಿದೆ;

ಇ) ಸದರಿ ಯೋಜನೆಯನ್ನು ಆರಂಭಿಸಲು ಬೇಕಾಗಿರುವ ಕಾಲಾವಧಿ ಎಷ್ಟು?

ಶ್ರೀ ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು) :

ಅ) ತುಂಗಾ ಏತ ನೀರಾವರಿ ಯೋಜನೆಯ ಇತ್ತೀಚಿನ ಪರಿಷ್ಕೃತ ಅಂದಾಜು ಕರ್ನಾಟಕ ನೀರಾವರಿ ನಿಗಮದ ತಾಂತ್ರಿಕ ಉಪ ಸಮಿತಿಯ 101ನೇ ಸಭೆಯಲ್ಲಿ ಚರ್ಚಿತವಾಗಿದ್ದು, ಉಪ ಸಮಿತಿಯು ತೆಗೆದುಕೊಂಡಿರುವ ಆಕ್ಷೇಪಣೆಗಳಿಗೆ ಅನುಸರಣೆಯನ್ನು ಸಲ್ಲಿಸುವ ಪ್ರಕ್ರಿಯೆ ಜಾರಿಯಲ್ಲಿದೆ. ಇದಾದ ನಂತರದಲ್ಲಿ, ಪರಿಷ್ಕೃತ ಅಂದಾಜಿಗೆ ಆಡಳಿತಾತ್ಮಕ ಅನುಮೋದನೆ ನೀಡಿದ ತರುವಾಯ ಕಾಮಗಾರಿಗಳನ್ನು ಪ್ರಾರಂಭ ಮಾಡಲಾಗುವುದು.

ಆ) ಸದರಿ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ದೊರೆತ ನಂತರ ಕರ್ನಾಟಕ ನೀರಾವರಿ ನಿಗಮದಿಂದ ಸೂಕ್ತ ಅನುದಾನವನ್ನು ಹಂಚಿಕೆ ಮಾಡಲಾಗುವುದು.

ಇ) ಈ ಯೋಜನೆಗೆ ಆಡಳಿತಾತ್ಮಕ ಅನುಮೋದನೆ ದೊರೆತು, ಟೆಂಡರ್ ಪ್ರಕ್ರಿಯೆ ಪೂರ್ಣಗೊಳಿಸಿಕೊಂಡು, ಕಾಮಗಾರಿಯನ್ನು ಪ್ರಾರಂಭಿಸಲು ಸಾಧ್ಯವಾಗುವುದು.

311 ಶ್ರೀ ಕರಡಿ ಸಂಗಣ್ಣ ಅಮರಪ್ಪ : ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೊಪ್ಪಳ ಜಿಲ್ಲೆಗೆ ಸಿಂಗಟಾಲೂರು ಏತ ನೀರಾವರಿಯ ಬಚಾವತ್ ಯೋಜನೆಯಡಿ ಎ ಮತ್ತು ಬಿ ಸ್ಕೀಂನಲ್ಲಿ ಎಷ್ಟು ಟಿಎಂಸಿ. ನೀರನ್ನು ಕಾಯ್ದಿರಿಸಲಾಗಿದೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಆ) ಹಂಚಿಕೆಯಾದ ನೀರಿನ ಪ್ರಮಾಣದಿಂದ ಯಾವ ಯಾವ ತಾಲ್ಲೂಕುಗಳಿಗೆ ಎಷ್ಟೆಷ್ಟು ಎಕರೆ ಭೂಮಿಗೆ ನೀರಾವರಿ ಸೌಲಭ್ಯ ಕಲ್ಪಿಸಲಾಗಿದೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಇ) ಕೊಪ್ಪಳ ತಾಲ್ಲೂಕಿನಲ್ಲಿ ನಿಗದಿಪಡಿಸಿರುವ ನೀರಾವರಿ ಅಚ್ಚುಕಟ್ಟು ಪ್ರದೇಶವೆಷ್ಟು; (ವಿವರಗಳನ್ನು ನೀಡುವುದು);

ಈ) ಎ. ಮತ್ತು ಬಿ. ಸ್ಕೀಂನ ಬಚಾವತ್ ಯೋಜನೆಯಡಿಯಲ್ಲಿ ಕೊಪ್ಪಳ ಜಿಲ್ಲೆಯ ಎಷ್ಟು ಗ್ರಾಮಗಳನ್ನು ಏತ ನೀರಾವರಿ ಯೋಜನೆಯಲ್ಲಿ ಸೇರಿಸಲಾಗಿದೆ; ಈ ಗ್ರಾಮಗಳಿಗೆ ಎಷ್ಟು ಪ್ರಮಾಣದಲ್ಲಿ ನೀರನ್ನು ಒದಗಿಸಲಾಗುತ್ತಿದೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಉ) ಎ. ಮತ್ತು ಬಿ. ಸ್ಕೀಂನ ಬಚಾವತ್ ಯೋಜನೆಯಡಿಯಲ್ಲಿ 2009–2010ನೇ ಸಾಲಿನಲ್ಲಿ ಕೊಪ್ಪಳ ಜಿಲ್ಲೆಗೆ ಹೊಸದಾಗಿ ಏತ ನೀರಾವರಿ ಯೋಜನೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರದೇಶಗಳನ್ನು ಆಯ್ಕೆ ಮಾಡಲಾಗಿದೆ; (ತಾಲ್ಲೂಕುವಾರು ವಿವರಗಳನ್ನು ನೀಡುವುದು);

ಶ್ರೀ ಬಸವರಾಜ ಬೊಮ್ಮಾಯಿ (ಜಲ ಸಂಪನ್ಮೂಲ ಸಚಿವರು) :

ಅ) ಕೊಪ್ಪಳ ಜಿಲ್ಲೆಗೆ ಸಿಂಗಟಾಲೂರು ಏತ ನೀರಾವರಿ ಯೋಜನೆಯಡಿ ಪ್ರತ್ಯೇಕವಾದ ನೀರಿನ ಹಂಚಿಕೆ ಮಾಡಿರುವುದಿಲ್ಲ.

ಆ) ಸಿಂಗಟಾಲೂರು ಏತ ನೀರಾವರಿ ಯೋಜನೆಯಡಿ ಹಂಚಿಕೆಯಾದ ನೀರಿನ ಪ್ರಮಾಣದಿಂದ ಒಂದು ಮತ್ತು ಎರಡನೇ ಹಂತದಲ್ಲಿ ನೀರಾವರಿಯಾಗುವ ತಾಲ್ಲೂಕುವಾರು ಕ್ಷೇತ್ರದ ವಿವರ ಈ ಕೆಳಗಿನಂತಿದೆ.

ತಾಲ್ಲೂಕು	ಹಂತ–1 (7.64 ಟಿಎಂಸಿ)		ಹಂತ–2 (4.39 ಟಿಎಂಸಿ)	
	ಭೌತಿಕ ಕ್ಷೇತ್ರ (ಎಕರೆಗಳಲ್ಲಿ)	ಬೆಳೆ ಕ್ಷೇತ್ರ (ಎಕರೆಗಳಲ್ಲಿ)	ಭೌತಿಕ ಕ್ಷೇತ್ರ (ಎಕರೆಗಳಲ್ಲಿ)	ಬೆಳೆ ಕ್ಷೇತ್ರ (ಎಕರೆಗಳಲ್ಲಿ)
ಹೂವಿನ ಹಡಗಲಿ	35,791	41,876	–	–
ಮುಂಡರಗಿ	28,000	32,760	4,982	5,830
ಕೊಪ್ಪಳ	12,390	14,496	–	–
ಗದಗ	–	–	39,073	45,715
ಒಟ್ಟು ಕ್ಷೇತ್ರ	**76,181**	**89,132**	**44,055**	**51,545**

ದಿನಾಂಕ: 01–06–2009 ರಂದು ರಾಜ್ಯದ ಬೃಹತ್ ಮತ್ತು ಮಧ್ಯಮ ನೀರಾವರಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಜರುಗಿಸಿದ್ದು, ಅದರಲ್ಲಿ ಸಿಂಗಟಾಲೂರು ಏತ ನೀರಾವರಿ ಯೋಜನೆಯನ್ನು 18.55 ಟಿಎಂಸಿ ನೀರಿನ ಬಳಕೆಯೊಂದಿಗಿನ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳುವಂತೆ ಸೂಚಿಸಲಾಗಿದೆ.

ಇ) ಈ ಯೋಜನೆಯಿಂದ ಹಂತ–1 ರಲ್ಲಿ ಕೊಪ್ಪಳ ತಾಲ್ಲೂಕಿನ 12,390 ಎಕರೆ ಭೌತಿಕ ಕ್ಷೇತ್ರಕ್ಕೆ ನೀರಾವರಿ ಸೌಲಭ್ಯ ಒದಗಿಸಲು ಯೋಜಿಸಲಾಗಿದೆ. ಬಾಕಿ ಉಳಿಯುವ 6.52 ಟಿಎಂಸಿ ನೀರನ್ನು ಬಳಸುವ ಕುರಿತು ಪರಿಶೀಲಿಸಲಾಗುತ್ತಿದೆ.

ಈ) ಈ ಕುರಿತು ಇನ್ನೂ ಸರ್ವೆ ಕಾರ್ಯ ಆಗಬೇಕಾಗಿದ್ದು, ತದನಂತರ ಗ್ರಾಮವಾರು ವಿವರ ಲಭ್ಯವಾಗುವುದು.

ಉ) ಇರುವುದಿಲ್ಲ.

333 ಶ್ರೀ ಮಹದೇವ ಪ್ರಸಾದ ಹೆಚ್.ಎಸ್. (ಗುಂಡ್ಲುಪೇಟೆ) : ಮಾನ್ಯ ಸಣ್ಣ ನೀರಾವರಿ, ಯೋಜನೆ ಮತ್ತು ಸಾಂಖ್ಯಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಡಾ: ಡಿ.ಎಂ. ನಂಜುಂಡಪ್ಪ ಪ್ರಾದೇಶಿಕ ಅಸಮತೋಲನ ವರದಿಯನ್ವಯ ಅತ್ಯಂತ ಹಿಂದುಳಿದ ಅತೀ ಹಿಂದುಳಿದ ಹಾಗೂ ಹಿಂದುಳಿದ ತಾಲ್ಲೂಕುಗಳಿಗೆ 2009–10ನೇ ಸಾಲಿನ ಆಯವ್ಯಯದಲ್ಲಿ ನಿಗದಿಪಡಿಸ ಲಾಗಿರುವ ಒಟ್ಟು ಅನುದಾನ ಎಷ್ಟು?

ಆ) ಪ್ರಸ್ತುತ ನಿಗದಿಪಡಿಸಲಾಗಿರುವ ವಿಶೇಷ ಅನುದಾನದಲ್ಲಿ ಎಲ್ಲಾ ಪ್ರತಿ ಇಲಾಖಾವಾರು, ಪ್ರತಿ ತಾಲ್ಲೂಕುವಾರು (ಅತ್ಯಂತ ಹಿಂದುಳಿದ, ಅತಿ ಹಿಂದುಳಿದ, ಹಿಂದುಳಿದ ತಾಲ್ಲೂಕು) ನಿಗಧಿಪಡಿಸಿರುವ ಅನುದಾನ ವಿವರ ಒದಗಿಸುವುದು?

ಶ್ರೀ ಗೋವಿಂದ ಎಂ ಕಾರಜೋಳ (ಸಣ್ಣ ನೀರಾವರಿ, ಯೋಜನೆ ಮತ್ತು ಸಾಂಖ್ಯಿಕ ಸಚಿವರು) :

ಅ) ಡಾ: ಡಿ.ಎಂ. ನಂಜುಂಡಪ್ಪ ಪ್ರಾವೇಶಿಕ ಅಸಮತೋಲನ ವರದಿಯನ್ವಯ ಅತ್ಯಂತ ಹಿಂದುಳಿದ, ಅತೀ ಹಿಂದುಳಿದ ಹಾಗೂ ಹಿಂದುಳಿದ ತಾಲ್ಲೂಕುಗಳಿಗೆ 2009–10ನೇ ಸಾಲಿನ ಆಯವ್ಯಯದಲ್ಲಿ ನಿಗಧಿಪಡಿಸಲಾಗಿರುವ ಒಟ್ಟು ಅನುದಾನ **2578.83** ಕೋಟಿ ರೂ.ಗಳು.

ಆ) ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.